ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೦೧

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೇಳನೇ ಅಧಿವೇಶನ

ಮಂಗಳವಾರ, ದಿನಾಂಕ: ೩ನೇ ಫೆಬ್ರವರಿ, ೨೦೧೫

---

**ಸಮೂಹ – II**

೧. ಇಂಧನ ಸಚಿವರು

೨. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು

೩. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು

೪. ಲೋಕೋಪಯೋಗಿ ಸಚಿವರು

೫. ಸಹಕಾರ ಮತ್ತು ಸಕ್ಕರೆ ಸಚಿವರು

೬. ಕೃಷಿ ರಾಜ್ಯ ಸಚಿವರು

---

## ಸ್ಥಳೀಯ ಸಂಸ್ಥೆಯ ಸ್ಥಾನಮಾನದ ಬಗ್ಗೆ ಸ್ಪಷ್ಟೀಕರಣ ನೀಡುವ ಕುರಿತು

ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –

೧ (೧೨೪) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು ಗ್ರಾಮೀಣ ಪ್ರದೇಶದ ಸ್ಪಷ್ಟೀಕರಣ ನೀಡುವ ಸಂಬಂಧ ಗ್ರಾಮೀಣ ಮೀಸಲಾತಿ ಅಧಿನಿಯಮದ ನಿಯಮಗಳನ್ನು ಸರಿಯಾಗಿ ಪಾಲಿಸದೆ ಮನಸ್ಸಿಗೆ ಬಂದಂತೆ ಸ್ಪಷ್ಟೀಕರಣ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇಂತಹ ಅಧಿಕಾರಿಗಳ ನಿರ್ಲಕ್ಷತೆ ಮೇಲೆ ಕೈಗೊಳ್ಳುವ ಕ್ರಮವೇನು :

(ಇ) ಕರ್ನಾಟಕ ಮುನಿಸಿಪಾಲಿಟಿ ಅಧಿನಿಯಮ ೧೯೬೪ ಮತ್ತು ಪೌರನಿಗಮ ಅಧಿನಿಯಮ ೧೯೭೬ರ ಅನ್ವಯ ಕರ್ನಾಟಕ ರಾಜ್ಯದಲ್ಲಿ ಹಾಲಿ ಎಷ್ಟು ಸ್ಥಳೀಯ ಸಂಸ್ಥೆ (ಮುನಿಸಿಪಾಲಿಟಿ) ಗಳಿವೆ : (ಜಿಲ್ಲಾವಾರು ಮಾಹಿತಿ ಕೊಡುವುದು)

(ಈ) ಸದರಿ ಸ್ಥಳೀಯ ಸಂಸ್ಥೆಗಳು ಯಾವ ದಿನಾಂಕದಿಂದ ಯಾವ ದಿನಾಂಕದವರೆಗೆ ಪುರಸಭೆ, ನಗರಸಭೆ, ನಗರಪಾಲಿಕೆ, ಮಹಾನಗರ ಪಾಲಿಕೆ, ಪಟ್ಟಣ ಪಂಚಾಯಿತಿ, ಅರ್ಬನ್ ಔಟ್‌ಗ್ರೌಥ್ ಅರೆನಗರ ನೋಟಿಫೈಡ್ ಏರಿಯಾ ಕಮಿಟಿ, ಪರಿವರ್ತನೆ ಹೊಂದುತ್ತಿರುವ ಪ್ರದೇಶಗಳಾಗಿದ್ದವು ಎಂಬುದನ್ನು ಅಧಿಸೂಚನೆಗಳ ಸಹಿತ ವಿವರಗಳನ್ನು ಕೊಡುವುದು :

(ಉ) ಸರ್ಕಾರದ ಕಡತ\ಪತ್ರ ಸಂಖ್ಯೆ : D.O. No. HUD 335 MNE 94, ದಿನಾಂಕ : ೧೨.೦೭.೧೯೯೪ರ ಪತ್ರದಲ್ಲಿ ತಿಳಿಸಿರುವಂತೆ ಯಾವ ಪ್ರದೇಶಗಳು ತಾಲ್ಲೂಕು ಕೇಂದ್ರಗಳಾಗಿದ್ದು, ಮಧ್ಯಂತರ ಮಂಡಲ್ ಪಂಚಾಯಿತಿಗಳಾಗಿದ್ದು ಮತ್ತು ಜನಸಂಖ್ಯೆ ೧೦ ಸಾವಿರಕ್ಕಿಂತ ಹೆಚ್ಚಿಗೆ ಹೊಂದಿದ್ದಂತಹ ಪ್ರದೇಶಗಳನ್ನು URBAN OUT-GROWTH (O.G.) ಎಂದು ವರ್ಗೀಕರಿಸಲಾಗಿದೆಯೇ ? (ವರ್ಗೀಕರಣಗೊಂಡ ಪ್ರದೇಶಗಳ ಪಟ್ಟಿಯನ್ನು ಒದಗಿಸುವುದು)

## ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಮೂಲಸೌಲಭ್ಯಗಳ ಕೊರತೆ ಬಗ್ಗೆ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೨ (೧೯) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪೌರಾಡಳಿತ ಇಲಾಖೆಯಲ್ಲಿ ಬರುವ ನಗರಸಭೆ, ಪಟ್ಟಣ ಪಂಚಾಯಿತಿ, ಪುರಸಭೆ ಹಾಗೂ ಮಹಾನಗರ ಪಾಲಿಕೆಗಳಲ್ಲಿ ಸ್ವಚ್ಛ ಭಾರತ ಕಾರ್ಯಕ್ರಮದ ಅನ್ವಯ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ :

(ಆ) ಪೌರಾಡಳಿತ ಇಲಾಖೆಯ ಅಧೀನದಲ್ಲಿ ಬರುವ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಶೌಚಾಲಯ ರಹಿತ ಮನೆಗಳ ಸಂಖ್ಯೆ ಎಷ್ಟು :

(ಇ) ಶೌಚಾಲಯಗಳನ್ನು ನಿರ್ಮಿಸಿಕೊಡುವಲ್ಲಿ ಕಾಲಮಿತಿಯೊಳಗೆ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆಯೇ : (ವಿವರ ನೀಡುವುದು)

((ಈ) ಪೌರಾಡಳಿತ ಇಲಾಖೆಯ ಅಧೀನದಲ್ಲಿ ಬರುವ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಒಳಚರಂಡಿ ಇಲ್ಲದಿರುವ ಸ್ಥಳೀಯ ಸಂಸ್ಥೆಗಳು ಯಾವುವು : (ಜಿಲ್ಲಾವಾರು ವಿವರ ನೀಡುವುದು)

(ಉ) ಈ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಒಳಚರಂಡಿ ವ್ಯವಸ್ಥೆ ಒದಗಿಸಲು ಹಮ್ಮಿಕೊಳ್ಳಲಾಗಿರುವ ಯೋಜನೆಗಳಾವುವು ? (ವಿವರ ಒದಗಿಸುವುದು)

**ವರಾಹಿ ನೀರಾವರಿ ಯೋಜನೆಯ ಅಣೆಕಟ್ಟಿನ ನೀರಿನಿಂದ ಖಾಸಗಿಯವರು ವಿದ್ಯುತ್ ಉತ್ಪಾದಿಸುತ್ತಿರುವ ಕುರಿತು**

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩ (೧೯) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವರಾಹಿ ನೀರಾವರಿ ಯೋಜನೆಯಡಿ ರೈತರ ಕೃಷಿ ನೀರಾವರಿಗಾಗಿ ಸುಮಾರು ೭೩ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾದ ಅಣೆಕಟ್ಟು (ಡೈವರ್ಷನ್ ವಿಯರ್) ನಿಂದ ವಾರ್ಷಿಕ ಸುಮಾರು ೧೦ ಕೋಟಿ ರೂಪಾಯಿ ಮೌಲ್ಯದ ವಿದ್ಯುತ್ತನ್ನು ಸರ್ಕಾರ ಖಾಸಗಿಯವರಿಂದ ಖರೀದಿಸುತ್ತಿರುವುದು ನಿಜವೇ ;

(ಆ) ಈ ವಿದ್ಯುತ್ ಉತ್ಪಾದನಾ ಸ್ಥಾವರವನ್ನು ಕೆ.ಪಿ.ಸಿ. ಯವರು ನಿರ್ವಹಿಸದೆ ಖಾಸಗಿಯವರಿಗೆ ನಿರ್ವಹಿಸಲು ನೀಡಿರುವ ಉದ್ದೇಶವೇನು ;

(ಇ) ರೈತರು ಮತ್ತು ಖಾಸಗಿ ವಿದ್ಯುತ್ ಉತ್ಪಾದನಾ ಸಂಸ್ಥೆಯವರ ನಡುವಿನ ಸಂಘರ್ಷವನ್ನು ತಪ್ಪಿಸಲು ಸರ್ಕಾರದಿಂದಲೇ ಈ ವಿದ್ಯುತ್ ಉತ್ಪಾದನಾ ಸ್ಥಾವರವನ್ನು ನಡೆಸಲು ಸಾಧ್ಯವಿಲ್ಲವೇ ?

**ಸಾವಯವ ಕೃಷಿ ಪದ್ಧತಿಯನ್ನು ಉತ್ತೇಜಿಸುವ ಬಗ್ಗೆ**

**ಡಾ: ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೪ (೭೯) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಸಾಯನಿಕ ಗೊಬ್ಬರಗಳ ಹೆಚ್ಚಿನ ಬಳಕೆಯಿಂದ ಭೂಮಿಯ ಫಲವತ್ತತೆ ಕುಸಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸಾವಯವ ಕೃಷಿ ಉತ್ತೇಜಿಸಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು : (ವಿವರಗಳನ್ನು ನೀಡುವುದು)

(ಇ) ಕೃಷಿ ಯಾಂತ್ರೀಕರಣ ಉತ್ತೇಜಿಸಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ;

(ಈ) ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಲ್ಲಿನ ರೈತರಿಗೆ ಯಂತ್ರೋಪಕರಣಗಳನ್ನು ವಿತರಿಸಲಾಗಿದೆಯೇ : ಹಾಗಿದ್ದಲ್ಲಿ, ಎಷ್ಟು ಜನ ರೈತರಿಗೆ ವಿತರಿಸಲಾಗಿದೆ ? (ವಿವರಗಳನ್ನು ಒದಗಿಸುವುದು)

**ಪವನ ವಿದ್ಯುತ್ ಕುರಿತು**

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೫ (೧೦೦) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಉತ್ಪಾದನೆಯಾಗುತ್ತಿರುವ ಪವನ ವಿದ್ಯುತ್ ಪ್ರಮಾಣ ಎಷ್ಟು ;

(ಆ) ಇದು ರಾಜ್ಯದ ಒಟ್ಟು ವಿದ್ಯುತ್ ಉತ್ಪಾದನೆಯ ಶೇಕಡಾ ಪ್ರಮಾಣ ಎಷ್ಟು ;

(ಇ) ಪವನ ವಿದ್ಯುತ್ ಉತ್ಪಾದಿಸುವ ಸರ್ಕಾರಿ ಹಾಗೂ ಖಾಸಗಿ ಕಂಪನಿಗಳು ಯಾವುವು : ಅವು ಉತ್ಪಾದಿಸುವ ವಿದ್ಯುತ್ ಪ್ರಮಾಣ ಎಷ್ಟು : (ಕಂಪನಿವಾರು ಮಾಹಿತಿ ನೀಡುವುದು)

(ಈ) ಖಾಸಗಿ ಕಂಪನಿಗಳಿಗೆ ಪವನ ವಿದ್ಯುತ್ ಉತ್ಪಾದಿಸಲು ಸರ್ಕಾರದಿಂದ ನೀಡಲಾಗುತ್ತಿರುವ ಸೌಲಭ್ಯಗಳೇನು ;

(ಉ) ಈ ಖಾಸಗಿ ಕಂಪನಿಗಳಿಂದ ಸರ್ಕಾರ ಖರೀದಿಸುವ ಪ್ರತಿ ಯೂನಿಟ್ ದರ ಎಷ್ಟು ; ಹಾಗೂ ವಾರ್ಷಿಕ ಎಷ್ಟು ಪ್ರಮಾಣದ ಪವನ್ ವಿದ್ಯುತ್ ಖರೀದಿಸಲಾಗುತ್ತಿದೆ ; ಅದಕ್ಕೆ ವ್ಯಯಿಸುವ ಹಣ ಎಷ್ಟು? (ವಿವರ ನೀಡುವುದು)

**ಬೆಂಗಳೂರು–ಮೈಸೂರು ರಾಷ್ಟ್ರೀಯ ಹೆದ್ದಾರಿಯ ವಿಳಂಬ**

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೬ (೨೪) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು–ಮೈಸೂರು ಹೆದ್ದಾರಿಯನ್ನು ರೂ. ೩,೦೦೦ ಕೋಟಿಗಳ ವೆಚ್ಚದಲ್ಲಿ ೬ ಪಥಗಳ ರಾಷ್ಟ್ರೀಯ ಹೆದ್ದಾರಿಯನ್ನಾಗಿ ಪರಿವರ್ತಿಸಲಾಗಿದೆಯೇ ; ಹಾಗಿದ್ದಲ್ಲಿ, ಸದರಿ ಯೋಜನೆಯ ಪೂರ್ಣ ಮಾಹಿತಿಯನ್ನು ಒದಗಿಸುವುದು ;

(ಆ) ೬ ಪಥದ ರಾಷ್ಟ್ರೀಯ ಹೆದ್ದಾರಿಯನ್ನಾಗಿ ಈವರೆವಿಗೂ ಘೋಷಿಸದಿದ್ದಲ್ಲಿ, ಯಾವಾಗ ಘೋಷಿಸಲಾಗುವುದು ; ವಿಳಂಬಕ್ಕೆ ಕಾರಣಗಳೇನು ;

(ಇ) ಮೇಲ್ಕಂಡ ಹೆದ್ದಾರಿಯ ಸರ್ವೆಯನ್ನು ಮಾಡಲಾಗಿದೆಯೇ ; ಮಾಡದಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು ;

(ಈ) ಮೇಲ್ಕಂಡ ಹೆದ್ದಾರಿಯ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ?

**ಲೋಕೋಪಯೋಗಿ ಇಲಾಖೆಯಲ್ಲಿ ಹಣ ದುರುಪಯೋಗಪಡಿಸಿಕೊಂಡ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ**

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೭ (೭೪) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಲೋಕೋಪಯೋಗಿ ಇಲಾಖೆಯಲ್ಲಿ ಹಣ ದುರುಪಯೋಗಪಡಿಸಿಕೊಂಡ ಪ್ರಕರಣಗಳ ಸಂಖ್ಯೆ ಎಷ್ಟು : ಎಷ್ಟು ಪ್ರಕರಣಗಳಲ್ಲಿ ತನಿಖೆ ಮುಕ್ತಾಯಗೊಂಡಿದೆ : ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು : (ಹಣ ದುರುಪಯೋಗಪಡಿಸಿಕೊಂಡ ಅಧಿಕಾರಿಗಳು ಹಾಗೂ ಅವರ ಹುದ್ದೆಗಳ ವಿವರ ನೀಡುವುದು)

(ಆ) ದುರುಪಯೋಗಪಡಿಸಿಕೊಂಡ ಹಣವನ್ನು ವಸೂಲು ಮಾಡುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಮೂಲ ಸೌಕರ್ಯ ಅಭಿವೃದ್ಧಿ ಕಾಮಗಾರಿಗಳಲ್ಲಿ ನಡೆದಿರುವ ಅಕ್ರಮದ ಬಗ್ಗೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೮ (೧೨೩) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರ :–

(ಅ) ಬೆಂಗಳೂರು ಲೋಕೋಪಯೋಗಿ ಇಲಾಖೆಯ ವಿಭಾಗದ ದೇವನಹಳ್ಳಿ ದೊಡ್ಡಬಳ್ಳಾಪುರ ತಾಲ್ಲೂಕಿನ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರ ಸರ್ಕಾರದ ಗಮನಕ್ಕೆ ಬಂದಿದೆಯೇ : ಬಂದಿದ್ದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು : (ವಿವರ ನೀಡುವುದು)

(ಆ) ಟೆಂಡರ್ ಫಾರಂ ವಿತರಣೆಯಲ್ಲಿ ಅವ್ಯವಹಾರ ನಡೆದಿರುವುದು ನಿಜವೇ : ಹಾಗಿದ್ದಲ್ಲಿ ಇದರಲ್ಲಿ ಶಾಮೀಲಾದವರು ಯಾರು: ಇವರ ಮೇಲೆ ಕೈಗೊಂಡ ಕ್ರಮವೇನು :

(ಇ) ಈ ಅಭಿವೃದ್ಧಿ ಕಾಮಗಾರಿಗೆ ತಗಲುವ ಒಟ್ಟು ಮೊತ್ತವೆಷ್ಟು : ಕಾಮಗಾರಿಯನ್ನು ಪೂರೈಸಲಾಗುವುದು ಯಾವಾಗ :

(ಈ) ತಪ್ಪಿತಸ್ಥರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು):

## ಬಡ ನೇಕಾರರಿಗೆ ೩% ಸಬ್ಸಿಡಿ ನೀಡದಿರುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೯ (೩೫) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಹಕಾರ ಸಂಘಗಳು ಹಾಗೂ ಬ್ಯಾಂಕ್‌ಗಳ ಮೂಲಕ ಕಳೆದ ಮೂರು ವರ್ಷಗಳಲ್ಲಿ ನೇಕಾರರಿಗೆ ನೀಡಿರುವ ಸಾಲದ ಮೊತ್ತವೆಷ್ಟು ; (ವರ್ಷವಾರು, ಜಿಲ್ಲೆ ಹಾಗೂ ತಾಲ್ಲೂಕುವಾರು ವಿವರ ನೀಡುವುದು)

(ಆ) ಸರ್ಕಾರದ ಆದೇಶದ ಪ್ರಕಾರ ೩% ಸಬ್ಸಿಡಿಯನ್ನು ಸೂಕ್ತ ಸಮಯದಲ್ಲಿ ನೇಕಾರರಿಗೆ ಬಿಡುಗಡೆ ಮಾಡದಿರಲು ಕಾರಣವೇನು ;

(ಇ) ಯಾವ–ಯಾವ ಬ್ಯಾಂಕ್ ಹಾಗೂ ಸಂಘ ಇದುವರೆಗೆ ಸಬ್ಸಿಡಿ ನೀಡದೆ ನೇಕಾರರನ್ನು ಕಷ್ಟಕ್ಕೀಡು ಮಾಡಲಾಗಿದೆ ಹಾಗೂ ಇದಕ್ಕೆ ಕಾರಣವೇನು ? (ಕಳೆದ ಮೂರು ವರ್ಷಗಳಲ್ಲಿ ಸಬ್ಸಿಡಿ ನೀಡದೆ ಇರುವ ಸಂಸ್ಥೆಗಳ ವಿವರ ನೀಡುವುದು)

## ಖಾಸಗಿ ಹಾಗೂ ಸರ್ಕಾರಿ ಸ್ವಾಮ್ಯಕ್ಕೆ ಒಳಪಟ್ಟಿರುವ ಗೃಹ ನಿರ್ಮಾಣ ಸಂಘಗಳ ಬಗ್ಗೆ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೧೦ (೧) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಸ್ವಾಮ್ಯಕ್ಕೆ ಒಳಪಡುವ ನೋಂದಾಯಿತ ಗೃಹ ನಿರ್ಮಾಣ ಸಹಕಾರಿ ಸಂಘ ಸಂಸ್ಥೆಗಳು ಯಾವ ಯಾವ ಇಲಾಖೆಯಲ್ಲಿ ಇವೆ ; ಸದರಿ ಸಹಕಾರಿ ಸಂಘಗಳ ಪೂರ್ಣ ವಿವರ ನೀಡುವುದು ;

(ಆ) ಅದೇ ರೀತಿ ರಾಜ್ಯದಲ್ಲಿರುವ ಖಾಸಗಿ ಸಹಕಾರ ಸಂಘ ಸಂಸ್ಥೆಗಳ ಸಂಖ್ಯೆ ಎಷ್ಟು ; ಸದರಿ ಖಾಸಗಿ ಸಂಘಗಳ ವಿಳಾಸದೊಂದಿಗೆ ಜಿಲ್ಲಾವಾರು ವಿವರ ನೀಡುವುದು ;

(ಇ) ಖಾಸಗಿ ಮತ್ತು ಸರ್ಕಾರಿ ಸ್ವಾಮ್ಯದ ಗೃಹ ನಿರ್ಮಾಣ ಮಂಡಳಿಗಳು ಎಷ್ಟೆಷ್ಟು ಸದಸ್ಯರನ್ನು ಹೊಂದಿವೆ ; (ಸದಸ್ಯರ ವಿವರ ನೀಡುವುದು)

(ಈ) ಅಂತಹ ಸದಸ್ಯರುಗಳಿಂದ ಯಾವ ಯಾವ ಗೃಹ ಮಂಡಳಿಗಳು ನಿವೇಶನ/ಮನೆಗಾಗಿ ಎಷ್ಟೆಷ್ಟು ಹಣ ಸಂಗ್ರಹಿಸಿವೆ ; ಹಾಗೆ ಸಂಗ್ರಹವಾದ ಹಣವನ್ನು ಬಳಕೆ ಮಾಡಲು ಇರುವ ನಿಬಂಧನೆಗಳೇನು ;

(ಉ) ಈ ರೀತಿ ನಿವೇಶನ/ಮನೆಗಳಿಗಾಗಿ ಸಂಗ್ರಹ ಮಾಡಿದ ಸದಸ್ಯರುಗಳಿಗೆ ಎಷ್ಟು ಅವಧಿಯಲ್ಲಿ ನಿವೇಶನ ನೀಡಬೇಕು ; ನೀಡದಿರುವ ಪಕ್ಷದಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಗ್ರಾಮ ಪಂಚಾಯಿತಿಗಳ ಮೂಲಕ ಸರ್ಕಾರಕ್ಕೆ ಬರಬೇಕಾದ ವಿದ್ಯುತ್ ಬಾಕಿ ಬಿಲ್ಲನ್ನು ಮನ್ನಾ ಮಾಡುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೧ (೩೧) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯಿತಿಗಳ ಮೂಲಕ ಸರ್ಕಾರಕ್ಕೆ ಪಾವತಿಸಲು ಬಾಕಿ ಇರುವ ವಿದ್ಯುತ್ ಬಿಲ್ಲಿನ ಮೊತ್ತ ಎಷ್ಟು ; (ಜಿಲ್ಲಾವಾರು ತಾಲ್ಲೂಕುವಾರು ವಿವರ ನೀಡುವುದು)

(ಆ) ಈಗಾಗಲೇ ಸರ್ಕಾರ ಭರವಸೆ ನೀಡಿರುವಂತೆ, ಗ್ರಾಮಪಂಚಾಯಿತಿಗಳ ಬಾಕಿ ವಿದ್ಯುತ್ ಬಿಲ್ಲನ್ನು ಮನ್ನಾ ಮಾಡುವ ಯೋಜನೆ ಸರ್ಕಾರಕ್ಕಿದೆಯೇ; ಇದ್ದಲ್ಲಿ, ಆದೇಶವನ್ನು ಯಾವಾಗ ಹೊರಡಿಸಲಾಗುವುದು ?

## ರೈತರ ಪಂಪ್‌ಸೆಟ್‌ಗಳಿಗೆ ಮೀಟರ್ ಅಳವಡಿಸುವ ಪ್ರಸ್ತಾವನೆ ಬಗ್ಗೆ

**ಶ್ರೀ ಜಿ. ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೨ (೧೦೪) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೈತರ ಪಂಪ್‌ಸೆಟ್‌ಗಳಿಗೆ ಮೀಟರ್ ಅಳವಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ೧೦ ಹೆಚ್.ಪಿ. ಮೋಟರ್‌ಗೆ ನೀಡಿರುವ ರಿಯಾಯಿತಿ ಎಷ್ಟು ; ಇದರಿಂದ ಸರ್ಕಾರಕ್ಕೆ ಎಷ್ಟು ಹೊರೆಯಾಗುತ್ತದೆ ;

(ಆ) ಈ ನಿಟ್ಟಿನಲ್ಲಿ ಸರ್ಕಾರದ ನಿಲುವೇನು ?

## ರಾಜ್ಯ ರಸ್ತೆ ಹೆದ್ದಾರಿಗಳಲ್ಲಿ ವಾಹನ ಸುಂಕ ವಸೂಲಾತಿ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೩ (೧೭) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ರಸ್ತೆ ಹೆದ್ದಾರಿಗಳಲ್ಲಿ ವಾಹನಗಳ ಸುಂಕ ವಸೂಲಾತಿ ರಸ್ತೆಗಳು ಯಾವುವು ; ಎಲ್ಲೆಲ್ಲಿ ಸುಂಕ ವಸೂಲಾತಿ ಟೋಲ್‌ಗೇಟ್‌ಗಳನ್ನು ನಿರ್ಮಿಸಲಾಗಿದೆ ; ಟೋಲ್ ವಸೂಲಾತಿಗೆ ಇರುವ ಮಾನದಂಡವೇನು ; ಎಷ್ಟು ವರ್ಷ ಟೋಲ್ ಹಣ ಸಂಗ್ರಹ ಮಾಡಬಹುದು ; (ಪ್ರತಿ ಟೋಲ್ ಸಂಗ್ರಹದ ಮಾಹಿತಿ ನೀಡುವುದು)

(ಆ) ಪ್ರತಿ ನಿತ್ಯ ಸಂಗ್ರಹವಾಗುವ ಟೋಲ್ ಹಣದ ಮಾಹಿತಿಯನ್ನು ಸಾರ್ವಜನಿಕರಿಗೆ ಆನ್–ಲೈನ್ ಮೂಲಕ ತಿಳಿಸಲು ಕೈಗೊಳ್ಳುವ ಕ್ರಮಗಳೇನು ?

## ರಸ್ತೆಗಳ ನಿರ್ಮಾಣ ಕಾಮಗಾರಿ ಕಳಪೆಯಿಂದ ಕೂಡಿರುವ ಕುರಿತು

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೧೪ (೬೭) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಒಂದು ವರ್ಷದಿಂದ ರಾಜ್ಯದಲ್ಲಿ ಲೋಕೋಪಯೋಗಿ ಇಲಾಖೆ ವಿಶೇಷ ಯೋಜನೆಯಡಿ ಕೈಗೊಂಡ ಕಾಮಗಾರಿಗಳು ಯಾವುವು ; ಸದರಿ ಕಾಮಗಾರಿಗಳಿಗೆ ಇದುವರೆವಿಗೂ ಬಿಡುಗಡೆ ಮಾಡಿರುವ ಮೊತ್ತ ಎಷ್ಟು;

(ಆ) ಸದರಿ ಯೋಜನೆಯಡಿ ರಸ್ತೆ ಅಭಿವೃದ್ಧಿ ಮತ್ತು ಡಾಂಬರೀಕರಣ ಕಾಮಗಾರಿಗಳು ತುಂಬಾ ಕಳಪೆ ಮಟ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಎಲ್ಲಾ ಕಾಮಗಾರಿಗಳ ಗುಣಮಟ್ಟವನ್ನು ನೋಡಿಕೊಳ್ಳುವ ಮತ್ತು ವರದಿಯನ್ನು ನೀಡುವ ಜವಾಬ್ದಾರಿಯನ್ನು ಯಾರಿಗೆ ನೀಡಲಾಗಿದೆ ;

(ಈ) ತುಮಕೂರು ಜಿಲ್ಲೆ, ಶಿರಾ ತಾಲ್ಲೂಕಿನ ಉದ್ದರಾಮನಹಳ್ಳಿ – ಸೀಗಲಹಳ್ಳಿ ನಡುವೆಯ ರಸ್ತೆ ಅಭಿವೃದ್ಧಿ ಮತ್ತು ರಸ್ತೆ ಡಾಂಬರೀಕರಣಕ್ಕೆ ಬಿಡುಗಡೆ ಮಾಡಿರುವ ಹಣ ಎಷ್ಟು ; (ಕಾಮಗಾರಿ ಪ್ರಾರಂಭಗೊಂಡ ವರ್ಷ ಮತ್ತು ಪೂರ್ಣಗೊಳಿಸಿದ ವರ್ಷದ ವಿವರ ನೀಡುವುದು)

(ಉ) ಸದರಿ ಕಾಮಗಾರಿ ಅತ್ಯಂತ ಕಳಪೆ ಮಟ್ಟದಲ್ಲಿ ನಡೆದಿರುವ ಬಗ್ಗೆ ಸ್ಥಳೀಯರಿಂದ ದೂರುಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಹಾಗಿದ್ದರೆ, ಸರ್ಕಾರ ಈ ಬಗ್ಗೆ ಯಾವ ರೀತಿಯ ಕ್ರಮ ಕೈಗೊಂಡಿದೆ ?

## ರೈತರ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಪೂರೈಕೆ ಮಾಡುವ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು)** –

೧೫ (೦೪) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಹಾಲಿ ಚಾಲ್ತಿಯಲ್ಲಿರುವ ರೈತರ ಪಂಪ್‌ಸೆಟ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ರೈತರ ಪಂಪ್‌ಸೆಟ್‌ಗಳಿಗೆ ಸದ್ಯ ಎಷ್ಟು ಗಂಟೆಗಳ ಕಾಲ ವಿದ್ಯುತ್ ಪೂರೈಸಲಾಗುತ್ತಿದೆ ;

(ಇ) ರೈತರ ಪಂಪ್‌ಸೆಟ್‌ಗಳಿಗೆ ೨೪ ಗಂಟೆಗಳ ಕಾಲ ವಿದ್ಯುತ್ ಪೂರೈಸುವ ಯೋಜನೆಗಳೇನಾದರೂ ಸರ್ಕಾರದ ಮುಂದಿದೆಯೇ : ಹಾಗಿದ್ದಲ್ಲಿ, ಈ ಯೋಜನೆಗಳು ಯಾವುವು ? (ವಿವರ ನೀಡುವುದು)

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಕಾ.ಸೂ. 1008, ಪ್ರತಿಗಳು– 1500 – ಪಿಕ